# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಚಂದ್ರಶೇಖರ ತಂದೆ ಸಂಗಪ್ಪ ಹುಣಸಗಿ, ಸದಸ್ಯರು, ವಜ್ಜಲ್ ಗ್ರಾಮ ಪಂಚಾಯಿತಿ, ಸುರಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರ ಪತ್ರ ಸಂಖ್ಯೆ ಜಿಪಂಯಾ:ಗ್ರಾಪಂ/ಸಿಬ್ಬಂದಿ/2015-16/413 ದಿನಾಂಕ: 05.05.2016.
2. ಸರ್ಕಾರದ ಪತ್ರ ಸಂಖ್ಯೆ: ಸಂ.ಗ್ರಾಅಪ:493:ಗ್ರಾಪಂಕಾ:2016, ದಿನಾಂಕ:15.09.2016 ರ ಕಾರಣ ಕೇಳುವ ನೋಟಿಸ್ಸು.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ದಿನಾಂಕ:05.05.2016 ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಯಾದಗಿರಿ ಜಿಲ್ಲೆ, ರವರ ಪತ್ರದಲ್ಲಿ ವಜ್ಜಲ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀ ಚಂದ್ರಶೇಖರ ತಂದೆ ಸಂಗಪ್ಪ ಹುಣಸಗಿರವರು, ಶ್ರೀ ಶಿವಕುಮಾರ್ ಚೌದರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ಜಲ ಗ್ರಾಮ ಪಂಚಾಯಿತಿ, ರವರಿಗೆ ದಿನಾಂಕ: 15.03.2016 ರಂದು ಸಾಯಂಕಾಲ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವಾಗ ಸದರಿಯವರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರ ಮೇಲೆ ದೈಹಿಕವಾಗಿ ಹಾಗೂ ಮಾನಸಿಕವಾಗಿ ಹಲ್ಲೆ ಮಾಡಿದ್ದಲ್ಲದೆ ಸರಕಾರಿ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಅಡ್ಡಿಪಡಿಸಿರುವುದಾಗಿ ಹಾಗೂ ಸದರಿಯವರು ಒಬ್ಬ ಜನಪ್ರತಿನಿಧಿಯಾಗಿದ್ದು ತಕ್ಕುದಲ್ಲದ ರೀತಿಯಲ್ಲಿ ನಡೆದುಕೊಂಡು ಒಬ್ಬ ಸರಕಾರಿ ನೌಕರನ ಮೇಲೆ ದೈಹಿಕವಾಗಿ ಹಾಗೂ ಮಾನಸಿಕವಾಗಿ ಹಲ್ಲೆ ಮಾಡಿರುವುದು ಸರಕಾರಿ ನಿಯಮಗಳ ವಿರುದ್ಧವಾಗಿದೆ ಹಾಗೂ ಸದರಿಯವರ ವಿರುದ್ಧ ಸುರಪೂರ ತಾಲೂಕಿನ ಹುಣಸಗಿ ಪೋಲಿಸ್ ಠಾಣೆಯಲ್ಲಿ (ಎಫ್ ಐ ಆರ್) ದೂರು ದಾಖಲಾಗಿರುತ್ತದೆ.

ಸದರಿ ವಿಷಯ ಕುರಿತು ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಮತ್ತು ಇತರ ಸದಸ್ಯರು, ಸಾರ್ವಜನಿಕವಾಗಿ ಹೇಳಿಕೆ ಪಡೆದುಕೊಂಡು ಸದರಿಯವರ ಮೇಲೆ ನಿಯಮಾನುಸಾರ ಕ್ರಮ ಜರುಗಿಸಿ, ಸದರಿಯವರ ಸದಸ್ಯತ್ವವನ್ನು ರದ್ದು ಮಾಡಲು ಕ್ರಮ ಕೈಗೊಳ್ಳುವಂತೆ ತಿಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಸದರಿಯವರು ಜನಪ್ರತಿನಿಧಿಯಾಗಿ ಸರ್ಕಾರಿ ನೌಕರನ ಮೇಲೆ ದೈಹಿಕವಾಗಿ ಮತ್ತು ಮಾನಸಿಕವಾಗಿ ಹಲ್ಲೆ ಮಾಡಿದ್ದಲ್ಲದೇ ಸರ್ಕಾರಿ ಕೆಲಸಕ್ಕೆ ತೊಂದರೆ ಉಂಟು ಮಾಡಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ನಿಯಮ 43(ಎ) ಅಡಿಯಲ್ಲಿ ಸದರಿಯವರ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಶ್ರೀ ಚಂದ್ರಶೇಖರ ತಂದೆ ಸಂಗಪ್ಪ ಹುಣಸಗಿ, ಸದಸ್ಯರು, ವಜ್ಜಲ್ ಗ್ರಾಮ ಪಂಚಾಯಿತಿ, ಸುರಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ ರವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರ ಅಡಿಯಲ್ಲಿ ಕ್ರಮವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟೀಸ್ಸನ್ನು ದಿನಾಂಕ:15.09.2016 ರಂದು ಜಾರಿಗೊಳಿಸಲಾಗಿದ್ದು, ಈ ಸಂಬಂಧ ಸದರಿಯವರು ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ.

ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ದಿನಾಂಕ:05.06.2017 ರಂದು ಮುಖ್ಯಕಾರ್ಯನಿರ್ವಾಹಕ ಅಧಿಕಾರಿಯವರ ವರದಿಯನ್ನು ಪರಿಶೀಲಿಸಿ, ಸರ್ಕಾರವು ಈ ಪ್ರಕರಣದಲ್ಲಿನ ವಾಸ್ತವಾಂಶಗಳನ್ನು ಮನದಟ್ಟು ಮಾಡಿಕೊಂಡು ಶ್ರೀ ಚಂದ್ರಶೇಖರ ತಂದೆ ಸಂಗಪ್ಪ ಹುಣಸಗಿ ರವರು ಶ್ರೀ ಶಿವಕುಮಾರ್ ಚೌದರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರವರಿಗೆ ದೈಹಿಕವಾಗಿ ಮತ್ತು ಮಾನಸಿಕವಾಗಿ ಹಲ್ಲೆ ಮಾಡಿದ್ದಲ್ಲದೇ, ಸರ್ಕಾರಿ ಕೆಲಸಕ್ಕೆ ತೊಂದರೆ ಉಂಟು ಮಾಡಿರುವುದು ಕಂಡು ಬಂದಿರುವುದರಿಂದ,

ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ರನ್ವಯ ಗ್ರಾಮ ಪಂಚಾಯಿತಿ ಸದಸ್ಯತ್ವವನ್ನು ರದ್ದುಪಡಿಸಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/493/ಗ್ರಾಪಂಕಾ/2016**

**ಬೆಂಗಳೂರು, ದಿನಾಂಕ:-16-09-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಚಂದ್ರಶೇಖರ ತಂದೆ ಸಂಗಪ್ಪ ಹುಣಸಗಿ, ಸದಸ್ಯರು, ವಜ್ಜಲ್ ಗ್ರಾಮ ಪಂಚಾಯಿತಿ, ಸುರಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ಇವರು ಶ್ರೀ ಶಿವಕುಮಾರ್ ಚೌದರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ಜಲ ಗ್ರಾಮ ಪಂಚಾಯಿತಿ, ರವರಿಗೆ ದೈಹಿಕವಾಗಿ ಮತ್ತು ಮಾನಸಿಕವಾಗಿ ಹಲ್ಲೆ ಮಾಡಿದ್ದಲ್ಲದೇ, ಸರ್ಕಾರಿ ಕೆಲಸಕ್ಕೆ ತೊಂದರೆ ಉಂಟು ಮಾಡಿರುವುದು ಕಂಡು ಬಂದಿರುವುದರಿಂದ, ಇವರನ್ನು ವಜ್ಜಲ ಗ್ರಾಮ ಪಂಚಾಯಿತಿಯ ಸದಸ್ಯ ಸ್ಥಾನದಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ರನ್ವಯ ತೆಗೆದು ಹಾಕಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

(ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಅಪ ಇಲಾಖೆ ರವರಿಂದ ಅನುಮೋದಿತ)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

16/9

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಯಾದಗಿರಿ ಜಿಲ್ಲೆ.
2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸುರಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ.
3. ಶ್ರೀ ಚಂದ್ರಶೇಖರ ತಂದೆ ಸಂಗಪ್ಪ ಹುಣಸಗಿ, ಸದಸ್ಯರು, ವಜ್ಜಲ್ ಗ್ರಾಮ ಪಂಚಾಯಿತಿ, ಸುರಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಜ್ಜಲ್ ಗ್ರಾಮ ಪಂಚಾಯಿತಿ, ಸುರಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
6. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.